## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2014-15ನೇ ಸಾಲಿನಲ್ಲಿ ಕೆರೆಗಳ ಪುನರುಜ್ಜೀವನ ಯೋಜನೆಯಡಿ ಜಿ.ಪಂ.ಕೆರೆಗಳಿಗಾಗಿ ಲೆಕ್ಕಶೀರ್ಷಿಕೆ4702ರಡಿ ಗದಗ ಜಿಲ್ಲಾ ಪಂಚಾಯತಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:46:ಆರ್‌ಆರ್‌ಸಿ:2011, ದಿನಾಂಕ 11.03.2011.
2. 2014-15ನೇ ಸಾಲಿನ ಆಯವ್ಯಯ ಅನುದಾನ.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35:ಆರ್‌ಆರ್‌ಸಿ:2014 ಬೆಂಗಳೂರು, ದಿನಾಂಕ:23.04.2014.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35/1:ಆರ್‌ಆರ್‌ಸಿ:2014, ದಿನಾಂಕ:06.08.2014.
5. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35/2:ಆರ್‌ಆರ್‌ಸಿ:2014, ದಿನಾಂಕ:01.12.2014.
6. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35(P1)/1:ಆರ್‌ಆರ್‌ಸಿ:2014, ದಿನಾಂಕ:21.02.2015.
7. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35(P1)/2:ಆರ್‌ಆರ್‌ಸಿ:2014, ದಿನಾಂಕ:28.02.2015
8. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35(P1)/3:ಆರ್‌ಆರ್‌ಸಿ:2014, ದಿನಾಂಕ:03.03.2015.
9. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35(P1)/4:ಆರ್‌ಆರ್‌ಸಿ:2014, ದಿನಾಂಕ:03.03.2015.
10. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35(P1)/5:ಆರ್‌ಆರ್‌ಸಿ:2014, ದಿನಾಂಕ:04.03.2015.
11. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35(P1)/6:ಆರ್‌ಆರ್‌ಸಿ:2014, ದಿನಾಂಕ:07.03.2015.
12. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35(P1)/7:ಆರ್‌ಆರ್‌ಸಿ:2014, ದಿನಾಂಕ:19.03.2015.
13. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35(P1)/8:ಆರ್‌ಆರ್‌ಸಿ:2014, ದಿನಾಂಕ:20.03.2015
14. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35(P1)/9:ಆರ್‌ಆರ್‌ಸಿ:2014, ದಿನಾಂಕ:25.03.2015

**ಪ್ರಸ್ತಾವನೆ:**

ಕೆರೆಗಳ ಪುನರುಜ್ಜೀವನ ಕಾರ್ಯಕ್ರಮದಡಿ ಜಿ.ಪಂ. ಕೆರೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಮೇಲೆ ಓದಲಾದ-1ರಲ್ಲಿನ ಸರ್ಕಾರದ ಆದೇಶದಂತೆ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸ್ತುತ 2014-15ನೇ ಸಾಲಿನಲ್ಲಿ ಈ ಕಾರ್ಯಕ್ರಮದಡಿ ಜಿ.ಪಂ. ಕೆರೆ ಕಾಮಗಾರಿಗಳಿಗಾಗಿ ಲೆ.ಶೀ.4702-00-101-1-14-132ರಡಿ ರೂ.51.225ಕೋಟಿಗಳನ್ನು ಪೂರಕ ಅಂದಾಜಿನಲ್ಲಿ ಹೆಚ್ಚುವರಿಯಾಗಿ ಒದಗಿಸಲಾಗಿದೆ. ಈ ಕಾರ್ಯಕ್ರಮದಡಿ ಪ್ರಗತಿ ಹೊಂದಿದ ಕೆರೆ ಕಾಮಗಾರಿಗಳ ಬಾಕಿ ಬಿಲ್ ಪಾವತಿಗೆ

ಗದಗ ಜಿ.ಪಂ. ಯು ಕೋರಿಕೆ ಸಲ್ಲಿಸಿದ್ದು, ಕೆರೆಗಳ ಪುನರುಜ್ಜೀವನ ಕಾರ್ಯಕ್ರಮದಡಿ ಲೆ.ಶೀ-4702 ರಲ್ಲಿನ ಪೂರಕ ಅಂದಾಜಿನಲ್ಲಿ ಹೆಚ್ಚುವರಿಯಾಗಿ ಒದಗಿಸಲಾದ ಅನುದಾನ ರೂ.51.225ಕೋಟಿಗಳಲ್ಲಿ ಈವರೆಗೂ ರೂ.50.2365 ಕೋಟಿಗಳನ್ನು ಜಿಲ್ಲಾ ಪಂಚಾಯತಿಗಳಿಗೆ ಕೆರೆಗಳ ಪುನರುಜ್ಜೀವನ ಕಾಮಗಾರಿಗಳ ಬಾಕಿ ಬಿಲ್ ಪಾವತಿಗೆ ಈಗಾಗಲೇ ಉಲ್ಲೇಖ-(6) ರಿಂದ (14)ರಲ್ಲಿ ಬಿಡುಗಡೆ ಮಾಡಲಾಗಿದೆ.. ಪ್ರಸ್ತುತ ಗದಗ ಜಿ.ಪಂ.ಗೆ ರೂ. 98.85 ಲಕ್ಷಗಳನ್ನು ಕೆರೆಗಳ ಪುನರುಜ್ಜೀವನ ಕಾರ್ಯಕ್ರಮದಡಿ ಕೈಗೊಂಡ ಜಿ.ಪಂ. ಕೆರೆಗಳ ಬಾಕಿ ಬಿಲ್ಲುಗಳ ಪಾವತಿಗಾಗಿ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ.

ಆದ್ದರಿಂದ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ: 35(P1)/10:ಆರ್‌ಆರ್‌ಸಿ:2014, ಬೆಂಗಳೂರು,ದಿನಾಂಕ:27.3.2015**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಪ್ರಸ್ತುತ 2014-15ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕೆರೆಗಳ ಪುನರುಜ್ಜೀವನ ಕಾರ್ಯಕ್ರಮದಡಿ ಗದಗ ಜಿ.ಪಂ.ಗೆ ರೂ. 98.85ಲಕ್ಷಗಳನ್ನು (ರೂಪಾಯಿಗಳು ತೊಂಬತ್ತೆಂಟು ಲಕ್ಷದ ಎಂಭತ್ತೈದು ಸಾವಿರಗಳು ಮಾತ್ರ) ಕೆರೆಗಳ ಬಾಕಿ ಬಿಲ್ಲುಗಳ ಪಾವತಿಗಾಗಿ ಲೆಕ್ಕ ಶೀರ್ಷಿಕೆ-4702-00-101-1-14-132-ಬಂಡವಾಳ ವೆಚ್ಚದಡಿ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು :**

1. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗ ಅಥವಾ ಕೆಆರ್‌ಐಡಿಎಲ್ ಇವರ ಕ್ರಿಯಾ ಯೋಜನೆಯಂತೆ ಅನುಷ್ಠಾನಗೊಳಿಸಿರುವ ಜಿ.ಪಂ. ಕೆರೆ ಕಾಮಗಾರಿಗಳ ಬಿಲ್ಲುಗಳ ಪಾವತಿಗೆ ಮಾತ್ರ ವಿನಿಯೋಗಿಸತಕ್ಕದ್ದು.

2. ಕೆರೆಗಳ ಪುನರುಜ್ಜೀವನ ಕಾರ್ಯಕ್ರಮದಡಿ ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಕಾಮಗಾರಿ ಅನುಸಾರ ಖಜಾನೆಯಿಂದ ಡಿ.ಸಿ. ಬಿಲ್ಲು ಮುಖಾಂತರವೇ ಡ್ರಾ ಮಾಡಿ ನೇರವಾಗಿ ಗುತ್ತಿಗೆದಾರರಿಗೆ ಪಾವತಿ ಮಾಡತಕ್ಕದ್ದು. ಕೆಆರ್‌ಐಡಿಎಲ್ ಮುಖಾಂತರ ಕಾಮಗಾರಿಯ ಅನುಷ್ಠಾನ ಮಾಡಿದಲ್ಲಿ ನಿಯಮಾನುಸಾರ ಬಿಲ್ ಪಾವತಿಸತಕ್ಕದ್ದು.

3. ಈ ಕಾರ್ಯಕ್ರಮದಡಿ ಬಿಡುಗಡೆಯಾದ ಅನುದಾನಕ್ಕೆ ವೆಚ್ಚದ ಮಾಹಿತಿ worksoft website ನಲ್ಲಿ upload ಮಾಡುವುದರೊಂದಿಗೆ ವೆಚ್ಚದ ಮಾಹಿತಿ ಹಾಗೂ ಹಣಬಳಕೆ ಪ್ರಮಾಣ ಪತ್ರದಲ್ಲಿ ಸಲ್ಲಿಸಿದಲ್ಲಿ ಮಾತ್ರ ಮುಂದಿನ ಕಂತಿನ ಅನುದಾನ ಬಿಡುಗಡೆಗೆ ಪರಿಗಣಿಸಲಾಗುವುದು. ಇಲ್ಲದಿದ್ದಲ್ಲಿ ಅಂತಹ ಜಿಲ್ಲೆಗಳಿಗೆ ಮುಂದಿನ ಕಂತಿನ ಅನುದಾನ ನೀಡಲಾಗುವುದಿಲ್ಲ.

4. ಬಿಡುಗಡೆಯಾದ ಅನುದಾನಕ್ಕೆ ವೆಚ್ಚದ ಮಾಹಿತಿಯನ್ನು ಹಾಗೂ ಕಾಮಗಾರಿಗಳ ಪ್ರಗತಿ ವಿವರವನ್ನು worksoft website ನಲ್ಲಿ ದಾಖಲಿಸತಕ್ಕದ್ದು.

5. ಈ ಕಾರ್ಯಕ್ರಮದಡಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಅಗತ್ಯ ಸಹಕಾರ ನೀಡುವುದರೊಂದಿಗೆ ಸಮನ್ವಯದ ಅಧಿಕಾರಿಗಳಾಗಿರುವುದರಿಂದ ಈ ಅನುದಾನ ಸಂಬಂಧ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜವಾಬ್ದಾರರಾಗಿರುತ್ತಾರೆ.

6. ಈ ಯೋಜನೆಯ ಪೂರ್ಣ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರ ಹಾಗೂ ವೆಚ್ಚದ ವಿವರಗಳನ್ನು ದಿನಾಂಕ:15.04.2015ರೊಳಗೆ ಯಾವುದೇ ನೆನಪೋಲೆಗೆ ಅವಕಾಶ ನೀಡದಂತೆ ಸರ್ಕಾರಕ್ಕೆ ತಪ್ಪದೆ ಸಲ್ಲಿಸತಕ್ಕದ್ದು.

7. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಹಣವನ್ನು ಜಿಲ್ಲಾ ಖಜಾನೆಯು ಪ್ರಸ್ತುತ ವರ್ಷಕ್ಕೆ ನಿಗಧಿಗೊಳಿಸುವ ದಿನಾಂಕದೊಳಗೆ ಡ್ರಾ ಮಾಡಿ ವಿನಿಯೋಗಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಕಂಡಿಕೆ ಟಿಪ್ಪಣಿ ಸಂಖ್ಯೆ: ಆಇ:245:ವೆಚ್ಚ-6:2014 ದಿನಾಂಕ:10.02.2015ರಲ್ಲಿ ನೀಡಿದ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2) ಕರ್ನಾಟಕ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಗಳ ಆಪ್ತಕಾರ್ಯದರ್ಶಿಗಳು, ಮುಖ್ಯಮಂತ್ರಿಗಳ ಕಾರ್ಯಾಲಯ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
8. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಪಿಎಂಯು) (ಐಎಫ್) 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು.
13. ವಿಶೇಷಾಧಿಕಾರಿಗಳು, (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
14. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
15. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
16. ಜಿಲ್ಲಾ ಖಜಾನಾಧಿಕಾರಿ, ಗದಗ.
17. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
18. ಅಧೀನ ಕಾರ್ಯದರ್ಶಿ, ವೆಚ್ಚ-6, ಜಿ.ಪಂ, ಆರ್ಥಿಕ ಇಲಾಖೆ, ಬೆಂಗಳೂರು.
19. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಗದಗ
20. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು.-9
21. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗದಗ.
22. ಮಾಹಿತಿ ಕೇಂದ್ರಕ್ಕೆ (10 ಪ್ರತಿಗಳು).
23. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.